# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಡಾ|| ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106

ಸಂ : ಸ.ಅ(ವಾ–106)/ಪಿ.ಆರ್/ **04** /2020–21 ದಿನಾಂಕ: 07/ **12/ 2020**

### ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 07–12–2020 ರಂದು ವಾರ್ಡ್ ಸಂಖ್ಯೆ: 106 ಡಾ|| ರಾಜ್‌ಕುಮಾರ್ ವಾರ್ಡ್ ನಲ್ಲಿ ಶ್ರೀಮತಿ. ಗೀತಾ ಎಲ್. ವಾರ್ಡ್ ನಂ. 106ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಗೀತಾ. ಎಲ್, ನೋಡಲ್ ಅಧಿಕಾರಿಗಳು
2) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ವಾರ್ಡ್ ನಂ. 106
3) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
4) ಮುರಳಿ ಮೋಹನ್, ಕಂದಾಯ ವಸೂಲಿಗಾರರು
5) ಅವಿನಾಶ್ ಎಸ್, ಆರೋಗ್ಯ ಪರಿವೀಕ್ಷಕರು
6) ರಾಜೇಶ್, ಆರೋಗ್ಯ ಪರಿವೀಕ್ಷಕರು
7) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
9) ಸೋಮೇಶ್, ಎನ್.ವಿ, ಕಿರಿಯ ಅಭಿಯಂತರರು, ಬೆಸ್ಕಾಂ
10) ಭೂದೇವಿ, ಲಿಂಕ್ ವರ್ಕರ್ 106 ವಾರ್ಡ್

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- **ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ:–** ಮಾನ್ಯ ಅಧ್ಯಕ್ಷರು ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಇಂಡಸ್ಟ್ರೀಯಲ್ ಎಸ್ಟೇಟ್ ಮತ್ತು ಇಂಡಸ್ಟ್ರೀಯಲ್ ಟೌನ್‌ನಲ್ಲಿರುವ ಕಸವನ್ನು ಶೀಘ್ರವಾಗಿ ತೆರವುಗೊಳಿಸಬೇಕೆಂದು ಸೂಚಿಸಿದರು.
- ಇಂಡಸ್ಟ್ರೀಯಲ್ ಟೌನ್ ಮತ್ತು ಅಗ್ರಹಾರ ದಾಸರಹಳ್ಳಿಯಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಕೆ ಪ್ರಗತಿಯಲ್ಲಿದ್ದು, ಶೀಘ್ರವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಹಾಗೂ ಅಗೆದಿರುವ ರಸ್ತೆಗಳನ್ನು ಮುಚ್ಚಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಮಾಸ್ಕ್ ದರಿಸದ ಸಾರ್ವಜನಿಕರಿಗೆ ದಂಡ ವಿಧಿಸುವುದು ಹಾಗೂ ಮಾಸ್ಕ್ ದರಿಸುವಂತೆ ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ಲಿಂಕ್ ವರ್ಕರ್‌ಗಳು ಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

Scanned with CamScanner

- ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಶೀಘ್ರವಾಗಿ ಮುಚ್ಚಲು ಮಾನ್ಯ ಅಧ್ಯಕ್ಷರು ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳಿಗೆ ಸೂಚಿಸಿದರು.
- ರಸ್ತೆ ಬದಿಯ ಹೋಟೆಲ್‌ಗಳಲ್ಲಿ ಶುಚಿತ್ವವನ್ನು ಕಾಪಾಡಿಕೊಳ್ಳಬೇಕೆಂದು ಮಾನ್ಯ ಅದ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಸೂಚಿಸಿದರು.
- ರಸ್ತೆಯಲ್ಲಿರುವ ಡೆಬ್ರಿಸ್ಗಳನ್ನು ಶೀಘ್ರವಾಗಿ ತೆರವುಗೊಳಿಸಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಅಂಡರ್ ಪಾಸ್‌ಗಳಲ್ಲಿ ಬೆಳೆದಿರುವ ಗಿಡಗಳನ್ನು ಶೀಘ್ರವಾಗಿ ತೆರವುಗೊಳಿಸಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ವಾರ್ಡ್‌ನಲ್ಲಿ ಮರಗಳ ಮೇಲೆ ಭಿತ್ತಿ ಪತ್ರಗಳನ್ನು ಅಂಟಿಸಿ ಜಾಹಿರಾತು ಮಾಡುತ್ತಿದ್ದು, ಅಂತವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ವಾರ್ಡ್‌ನ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ಮಾಡಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

07/12/2020.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕಅಭಿಯಂತರರು
ವಾರ್ಡ್ ನಂ. 106 ಡಾ॥ ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್‌ಅಧಿಕಾರಿ
ವಾರ್ಡ್ ನಂ. 106 ಡಾ॥ ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

1) ಮಾನ್ಯಆಯುಕ್ತರುರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕಕಾರ್ಯಪಾಲಕಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕಕಾರ್ಯಪಾಲಕಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ

Scanned with CamScanner